(10)

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ಬೆಂಗಳೂರು ಕೃಷಿ ವಿಶ್ವವಿದ್ಯಾಲಯಕ್ಕೆ 2013-14ನೇ ಸಾಲಿನ ಯೋಜನೆ ಅಡಿಯಲ್ಲಿ ಮೊದಲನೇ ತ್ರೈಮಾಸಿಕ ಅನುದಾನ ಬಿಡುಗಡೆ ಮಾಡುವ ಬಗ್ಗೆ.

\- - - - -

ಓದಲಾಗಿದೆ :-

1. ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು, ಇವರ ದಿನಾಂಕ : 15-04-2013 ಮತ್ತು 30-05-2013ರ ಪತ್ರ ಸಂಖ್ಯೆ : ಹನಿಅ/ ವಿಭಾಗ 3/ಸಿ5-2/2013-14.

ಪ್ರಸ್ತಾವನೆ :-

2013-14ನೇ ಸಾಲಿನ ಆಯವ್ಯಯದಲ್ಲಿ ಬೆಂಗಳೂರು ಕೃಷಿ ವಿಶ್ವವಿದ್ಯಾಲಯಕ್ಕೆ ಯೋಜನೆ ಅನುದಾನವಾಗಿ ಒಟ್ಟು ರೂ. 2900.00 ಲಕ್ಷಗಳನ್ನು ಕ್ರಮವಾಗಿ 20 ಘಾರಂಗಳಲ್ಲಿ ಕೃಷಿ ಸಂಶೋಧನಾ ಸಾಮರ್ಥ್ಯದ ಬಲವರ್ಧನೆಗಾಗಿ ಲೆಕ್ಕಶೀರ್ಷಿಕೆ 2415-80-004-1-01-101 ಅಡಿಯಲ್ಲಿ ರೂ. 1425.00 ಲಕ್ಷಗಳನ್ನು ಹಾಗೂ ಕಾಲೇಜಿನ ಪ್ರಯೋಗ ಶಾಲೆ, ಗ್ರಂಥಾಲಯ ಹಾಗೂ ಇತರೆ ಬೋಧನೆಗೆ ಸಂಬಂಧಪಟ್ಟ ಚಟುವಟಿಕೆಗಳ ಸುಧಾರಣೆಗೆ ಕೃಷಿ ಶಿಕ್ಷಣ ಲೆಕ್ಕಶೀರ್ಷಿಕೆ 2415-80-277-1-01-101 ಅಡಿಯಲ್ಲಿ ರೂ. 1475.00 ಲಕ್ಷಗಳನ್ನು ನಿಗಧಿಗೊಳಿಸಲಾಗಿದೆ. ಬೆಂಗಳೂರು ಕೃಷಿ ವಿಶ್ವವಿದ್ಯಾಲಯದ ಹಣಕಾಸು ನಿಯಂತ್ರಣಾಧಿಕಾರಿಗಳ ಮೇಲೆ (1)ರಲ್ಲಿ ಓದಲಾದ ದಿನಾಂಕ : 15-04-2013ರ ಪತ್ರದೊಂದಿಗೆ 2012-13 ನೇ ಸಾಲಿನಲ್ಲಿ ಮಾರ್ಚ್ 2013ರ ಅಂತ್ಯದವರೆಗೆ ಯೋಜನೆ ಅಡಿಯಲ್ಲಿ ಖರ್ಚಾದ ಬಳಕೆ ಪ್ರಮಾಣ ಪತ್ರವನ್ನು ಲಗತ್ತಿಸುತ್ತಾ ಕೃಷಿ ಸಂಶೋಧನಾ ಲೆಕ್ಕಶೀರ್ಷಿಕೆ 2415-80-004-1-01-101ರಲ್ಲಿ ರೂ. 1425.00 ಲಕ್ಷಗಳ ಪೈಕಿ ರೂ. 356.25 ಲಕ್ಷಗಳನ್ನು ಹಾಗೂ ಕೃಷಿ ಶಿಕ್ಷಣದ ಲೆಕ್ಕಶೀರ್ಷಿಕೆ 2415-80-277-1-01-101ರಲ್ಲಿ ರೂ. 1475.00 ಲಕ್ಷಗಳ ಪೈಕಿ ರೂ. 368.75 ಲಕ್ಷಗಳನ್ನು 1ನೇ ತ್ರೈಮಾಸಿಕ ಅನುದಾನವನ್ನಾಗಿ ಬಿಡುಗಡೆ ಮಾಡುವಂತೆ ಕೋರಿರುತ್ತಾರೆ.

ಸರ್ಕಾರವು ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ : ಕೃಇ 24 ಕೃವಿಬೆ 2013,**

**ಬೆಂಗಳೂರು, ದಿನಾಂಕ : 21-06-2013**

ಪ್ರಸ್ತಾವನೆಯಲ್ಲಿ ವಿವರಿಸಲಾದ ಕಾರಣಗಳ ಹಿನ್ನೆಲೆಯಲ್ಲಿ ಬೆಂಗಳೂರು ಕೃಷಿ ವಿಶ್ವವಿದ್ಯಾಲಯಕ್ಕೆ 2013-14ನೇ ಸಾಲಿನ ಆಯವ್ಯಯದಲ್ಲಿ ಕ್ರಮವಾಗಿ ಕೃಷಿ ಸಂಶೋಧನೆ ಲೆಕ್ಕಶೀರ್ಷಿಕೆ 2415-80-004-1-01-101ರಲ್ಲಿ ರೂ. 356.25 ಲಕ್ಷಗಳನ್ನು ಹಾಗೂ ಕೃಷಿ ಶಿಕ್ಷಣದ ಲೆಕ್ಕಶೀರ್ಷಿಕೆ 2415-80-277-1-01-101ರಲ್ಲಿ ರೂ. 368.75 ಲಕ್ಷಗಳನ್ನು ಯೋಜನೆಯಡಿ ಒಟ್ಟು ರೂ. 725.00 ಲಕ್ಷ (ರೂಪಾಯಿ ಏಳು ನೂರ ಇಪ್ಪತ್ತೈದು ಲಕ್ಷಗಳು ಮಾತ್ರ)ಗಳನ್ನು ಮೊದಲನೇ ತ್ರೈಮಾಸಿಕ ಅನುದಾನವನ್ನಾಗಿ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಬಿಡುಗಡೆ ಮಾಡಲಾಗಿದೆ :-

- ಪ್ರತಿ ತಿಂಗಳ ಅನುದಾನವನ್ನು ಆಯಾ ತಿಂಗಳ 20ನೇ ತಾರೀಖಿನಂದು ಅಥವಾ 20ನೇ ತಾರೀಖಿನ ನಂತರ ಹಿಂದಿನ ತಿಂಗಳ ಬಳಕೆ ಪ್ರಮಾಣ ಪತ್ರವನ್ನು ಒದಗಿಸಿ ಬಿಲ್ಲಿಗೆ ಮೇಲು ರುಜು ಪಡೆಯತಕ್ಕದ್ದು;
- ಸರ್ಕಾರವು ಯಾವ ಉದ್ದೇಶಕ್ಕಾಗಿ ಅನುದಾನ ಬಿಡುಗಡೆ ಮಾಡುವುದೋ ಅದೇ ಉದ್ದೇಶಕ್ಕಾಗಿ ಅನುದಾನವನ್ನು ಉಪಯೋಗಿಸತಕ್ಕದ್ದು;

...2

- ಸರ್ಕಾರವು ನೀಡಿದ ಸೂಚನೆ, ಆದೇಶಗಳನುಸಾರ ಕೃಷಿ ವಿಶ್ವವಿದ್ಯಾಲಯದವರು ಯೋಜನೆಯ ವೆಚ್ಚದಲ್ಲಿ ಕಟ್ಟುನಿಟ್ಟಾಗಿ ಮಿತವ್ಯಯವನ್ನು ಪಾಲಿಸತಕ್ಕದ್ದು;
- ಬಿಡುಗಡೆಯಾಗಿರುವ ಅನುದಾನದ ಬಗ್ಗೆ ಸೂಕ್ತ ಸಮಯದಲ್ಲಿ ಮಹಾಲೇಖಪಾಲರ ಲೆಕ್ಕಗಳೊಂದಿಗೆ ಹೊಂದಾಣಿಕೆ ಮಾಡಿಕೊಳ್ಳತಕ್ಕದ್ದು;
- ಬಿಡುಗಡೆ ಮಾಡಲಾಗಿರುವ ಅನುದಾನವನ್ನು ಆರ್ಥಿಕ ಪರಿಸ್ಥಿತಿಯನ್ನು ಅನುಸರಿಸಿ ಆರ್ಥಿಕ ಇಲಾಖೆಯು ನೀಡಬಹುದಾದ ಸೂಚನೆಗಳಿಗೆ ಒಳಪಟ್ಟಿರುತ್ತದೆ;
- ಆಯಾ ತಿಂಗಳಿಗೆ ಪ್ರತ್ಯೇಕ ಬಿಲ್ಲನ್ನು ಒದಗಿಸುವುದು.

2. ಬಿಡುಗಡೆಯಾಗಿರುವ ಅನುದಾನಕ್ಕೆ ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು, ಇವರು ಸಲ್ಲಿಸುವ ಬಿಲ್ಲಿಗೆ ಮೇಲು ರುಜು ಮಾಡುವ ಅಧಿಕಾರವನ್ನು ಸರ್ಕಾರದ ಅಧೀನ ಕಾರ್ಯದರ್ಶಿ, ಕೃಷಿ ಇಲಾಖೆ (ಯೋಜನೆಗಳು), ಇವರಿಗೆ ನೀಡಲಾಗಿದೆ.

3. ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರ ದಿನಾಂಕ: 11-06-2013 ರ ಟಿಪ್ಪಣಿ ಸಂಖ್ಯೆ: ಕೃಇ 92 ಆಂಆಸ 2013 ರಲ್ಲಿ ನೀಡಿರುವ ಸಹಮತಿ ಹಾಗೂ ಆರ್ಥಿಕ ಇಲಾಖೆಯ ದಿನಾಂಕ : 10-05-2013ರ ಆದೇಶ ಸಂಖ್ಯೆ : ಎಫ್‌ಡಿ 8 ಟಿಎಫ್‌ಪಿ 2013ರಲ್ಲಿ ಆಡಳಿತಾತ್ಮಕ ಇಲಾಖಾ ಪ್ರಧಾನ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾದ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

21/6

(ಜೆ. ಆರ್. ವಿಶ್ವನಾಥಾಚಾರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ (ಕೃಷಿ ಯೋಜನೆ)

ಇವರಿಗೆ :-

1. ಮಹಾಲೇಖಪಾಲರು, ಕರ್ನಾಟಕ (ಲೆಕ್ಕಪತ್ರ/ತನಿಖೆ), ಬೆಂಗಳೂರು.
2. ಕುಲಪತಿಗಳು, ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು.
3. ರಾಜ್ಯ ಹುಜೂರ್ ಖಜಾನಾಧಿಕಾರಿಗಳು, ಬೆಂಗಳೂರು.
4. ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು.
5. ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು.
6. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-2 & 4), ವಿಧಾನ ಸೌಧ, ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕೃಷಿ ಇಲಾಖೆರವರ ಆಪ್ತ ಸಹಾಯಕರು, ಬಹುಮಹಡಿಗಳ ಕಟ್ಟಡ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.